ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೫

ಪಟ್ಟಿ–೧೯

# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತನೆಯ ಅಧಿವೇಶನ**

**(ಮುಂದುವರೆದ ಉಪವೇಶನ)**

**ಬುಧವಾರ, ದಿನಾಂಕ ೧೩ನೇ ಜುಲೈ, ೨೦೧೬**

---

**ಸಮೂಹ – III**

೧. ಅರಣ್ಯ ಸಚಿವರು

೨. ಕಂದಾಯ ಸಚಿವರು

೩. ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು

೪. ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು

೫. ಕಾರ್ಮಿಕ ಸಚಿವರು

೬. ಜವಳಿ ಹಾಗೂ ಮುಜರಾಯಿ ರಾಜ್ಯ ಸಚಿವರು

೭. ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು

---

## ಕೋಲಾರ ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಗಳಿಗೆ ಶಾಶ್ವತ ಕುಡಿಯುವ ನೀರನ್ನು ಒದಗಿಸುವ ಬಗ್ಗೆ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೨೭೧ (೨೨೪೬) ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೋಲಾರ ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಗಳಿಗೆ ಕುಡಿಯುವ ನೀರನ್ನು ಒದಗಿಸಲು ಮಲೆನಾಡಿನ ಶರಾವತಿ ಹಾಗೂ ಅಘನಾಶಿನಿ ನದಿಗಳಿಂದ ನೀರು ತರುವ ಉದ್ದೇಶ ಸರ್ಕಾರಕ್ಕೆ ಇದೆಯೇ;

(ಆ) ಈ ಜಿಲ್ಲೆಗಳಿಗೆ ನೀರು ತರುವುದು ಸೇರಿದಂತೆ ವಿವಿಧ ಸಾಧ್ಯತೆಗಳ ಬಗ್ಗೆ ಪರಿಶೀಲಿಸಲು ಕೇಂದ್ರ ಜಲ ಆಯೋಗದ ಮಾಜಿ ಅಧ್ಯಕ್ಷರಾದ ಶ್ರೀ ಎ.ಕೆ. ಬಜಾಜ್ ನೇತೃತ್ವದ ಸಮಿತಿಯನ್ನು ರಚಿಸಲಾಗಿದೆಯೇ;

(ಇ) ಹಾಗಿದ್ದಲ್ಲಿ, ಈ ಸಮಿತಿಗೆ ವರದಿ ನೀಡಲು ನಿಗದಿಪಡಿಸಿದ್ದ ಅವಧಿ ಎಷ್ಟು;

(ಈ) ಈ ಯೋಜನೆಗೆ ಬೇಕಾದ ಅನುದಾನವನ್ನು ಸರ್ಕಾರ ನಿಗದಿಪಡಿಸಿದೆಯೇ?

## ವರಾಹಿ ನೀರಾವರಿ ಯೋಜನೆಯಲ್ಲಿ ಮೂರನೇ ಪಕ್ಷಗಾರರ ತನಿಖೆಗೊಳಪಟ್ಟ ೮ ಪ್ರಕರಣಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೭೨ (೨೩೦೦) ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕರ್ನಾಟಕ ನೀರಾವರಿ ನಿಗಮದಿಂದ ನಿರ್ವಹಿಸಲ್ಪಡುತ್ತಿರುವ ವರಾಹಿ ನೀರಾವರಿ ಯೋಜನೆಯಲ್ಲಿ ಮೂರನೇ ಪಕ್ಷಗಾರರಿಂದ (Third Party Inspection) ತನಿಖೆಗೆ ಒಳಪಡಿಸಲಾದ ೮ ಪ್ರಕರಣಗಳ ತನಿಖಾ ವರದಿ ಬಂದಿದೆಯೇ; ಬಾರದಿದ್ದಲ್ಲಿ, ಕಾರಣಗಳೇನು; ತನಿಖಾ ವರದಿ ಬಂದಲ್ಲಿ ತೆಗೆದುಕೊಂಡ ಕ್ರಮಗಳೇನು; (ತನಿಖಾ ವರದಿಯ ಪ್ರತಿಗಳನ್ನು ನೀಡುವುದು)

(ಆ) ಕರ್ನಾಟಕ ನೀರಾವರಿ ನಿಗಮದಿಂದ ನಿರ್ವಹಿಸಲ್ಪಡುತ್ತಿರುವ ವರಾಹಿ ನೀರಾವರಿ ಯೋಜನೆಯಲ್ಲಿ ಮೂರನೇ ಪಕ್ಷಗಾರರಿಂದ ತನಿಖೆಗೆ (Third Party Inspection) ಒಳಪಟ್ಟ ಗುತ್ತಿಗೆಗಳನ್ನು ನಿರ್ವಹಿಸಿದ ಗುತ್ತಿಗೆದಾರರಿಗೆ ದಂಡ ರಹಿತ ಅವಧಿ ವಿಸ್ತರಣೆ, ಹೆಚ್ಚುವರಿ ಆರ್ಥಿಕ ಹೊಣೆಗಾರಿಕೆ (EFI) ಮುಂತಾದ ಸೌಲಭ್ಯ ನೀಡುವುದರ ಮೂಲಕ ಅಕ್ರಮಗಳಿಗೆ ಇಲಾಖಾಧಿಕಾರಿಗಳು ಸಹಕರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರದ ಬೊಕ್ಕಸಕ್ಕೆ ಕೋಟ್ಯಾಂತರ ರೂಪಾಯಿ ನಷ್ಟ ಉಂಟು ಮಾಡಿರುವ ಇಲಾಖಾಧಿಕಾರಿಗಳ ಮೇಲೆ ಸರ್ಕಾರ ಕ್ರಮ ಕೈಗೊಳ್ಳುವುದೇ; ಇಲ್ಲವಾದಲ್ಲಿ, ಕಾರಣವೇನು;

(ಇ) ರೈತರು ನ್ಯಾಯಕ್ಕಾಗಿ ಮಾನ್ಯ ಉಚ್ಚ ಹಾಗೂ ಸರ್ವೋಚ್ಚ ನ್ಯಾಯಾಲಯದ ಮೊರೆ ಹೋಗುವುದನ್ನು ತಪ್ಪಿಸಲು ಇಲಾಖೆ ನ್ಯಾಯಯುತ ಕ್ರಮ ಕೈಗೊಳ್ಳುವುದೇ?

## ಆನೆಗಳ ಹಾವಳಿಯ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –**

೧೭೩ (೧೧೮೪) ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಚಿಕ್ಕಮಗಳೂರು ಜಿಲ್ಲೆಯ ಯಾವ ಯಾವ ಭಾಗದಲ್ಲಿ ಆನೆಗಳ ದಾಳಿ ಆಗಾಗ್ಗೆ ನಡೆಯುತ್ತಿರುತ್ತದೆ;

(ಆ) ಆನೆಗಳ ಹಾವಳಿಯಿಂದ ಮೃತಪಟ್ಟವರ ಸಂಖ್ಯೆ ಎಷ್ಟು; ಅವರಿಗೆ ನೀಡಿದ ಪರಿಹಾರ ಧನ ಎಷ್ಟು; ಉಂಟಾದ ಬೆಳೆ ನಷ್ಟ ಎಷ್ಟು; ಬೆಳೆ ನಷ್ಟ ಉಂಟಾದ ರೈತರಿಗೆ ಪರಿಹಾರ ನೀಡಲಾಗಿದೆಯೇ; (ವಿವರ ನೀಡುವುದು)

(ಇ) ಆನೆಗಳ ಹಾವಳಿಯನ್ನು ನಿಯಂತ್ರಣ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ೯೪–ಸಿ ಮತ್ತು ೯೪–ಸಿಸಿ ಯೋಜನೆ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೭೪ (೧೧೯೩) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೯೪–ಸಿ ಮತ್ತು ೯೪–ಸಿಸಿ ಕಾಯಿದೆಯಂತೆ ಸ್ವೀಕೃತವಾದ ಅರ್ಜಿಗಳ ಸಂಖ್ಯೆ ಎಷ್ಟು; (ಜಿಲ್ಲೆ–ತಾಲ್ಲೂಕುವಾರು ವಿವರ ಒದಗಿಸುವುದು)

(ಆ) ೯೪–ಸಿ ಮತ್ತು ೯೪–ಸಿಸಿ ಕಾಯಿದೆಯಡಿ ವಿತರಿಸಲಾದ ಹಕ್ಕು ಪತ್ರಗಳ ಸಂಖ್ಯೆ ಎಷ್ಟು; ತಿರಸ್ಕರಿಸಲಾದ ಅರ್ಜಿಗಳ ಸಂಖ್ಯೆ ಎಷ್ಟು;

(ಇ) ೯೪–ಸಿ, ೯೪–ಸಿಸಿ ಕಾಯಿದೆಯಡಿ ಭೂಮಿ/ನಿವೇಶನ ಹಕ್ಕು ಪತ್ರ ನೀಡಲು ನಿಗದಿಪಡಿಸಿದ ಶುಲ್ಕವೆಷ್ಟು; (ಆದೇಶದ ಪ್ರತಿ ಒದಗಿಸುವುದು)

(ಈ) ನಿವೇಶನದ ಶುಲ್ಕ ಕಡಿಮೆಗೊಳಿಸುವುದಾಗಿ ಸರ್ಕಾರ ಘೋಷಿಸಿದ್ದರೂ ಆದೇಶ ಹೊರಡಿಸದೇ ಇರುವುದು ನಿಜವೇ; ಯಾವಾಗ ಹೊಸ ಆದೇಶ ಹೊರಡಿಸಲಾಗುವುದು;

(ಉ) ೯೪–ಸಿ, ೯೪–ಸಿಸಿ ಯೋಜನೆಯಡಿ ಅರ್ಜಿ ವಿಲೇವಾರಿ ವಿಳಂಬವಾಗುತ್ತಿದ್ದು ಬಡ ನಿವೇಶನ ರಹಿತರಿಗೆ ಶೀಘ್ರವಾಗಿ ಹಕ್ಕುಪತ್ರ ನೀಡುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ? (ಸಂಪೂರ್ಣ ವಿವರ ಒದಗಿಸುವುದು)

## ಬೀದರ್ ಜಿಲ್ಲೆಯ ಕಾರಂಜ ನೀರಾವರಿ ಯೋಜನೆ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೭೫ (೨೨೬೭) ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯ ಕಾರಂಜ ನೀರಾವರಿ ಯೋಜನೆ ಯಾವ ಹಂತದಲ್ಲಿದೆ;

(ಆ) ಈ ಯೋಜನೆಗೆ ಬಿಡುಗಡೆಯಾದ ಅನುದಾನ ಎಷ್ಟು;

(ಇ) ಈ ನೀರಾವರಿ ಯೋಜನೆಯಿಂದ ಬೀದರ್ ಜಿಲ್ಲೆಯ ಎಷ್ಟು ಹೆಕ್ಟೇರ್ ಪ್ರದೇಶ ನೀರಾವರಿಗೆ ಒಳಪಡುತ್ತದೆ;

(ಈ) ಈ ಯೋಜನೆಯ ಕಾಮಗಾರಿ ಯಾವಾಗ ಪೂರ್ಣಗೊಳ್ಳುವುದು?

## ಗಣಕೀಕೃತ ಪಹಣಿ ಪ್ರತಿ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೭೬ (೨೩೩೩) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಗಣಕೀಕೃತ ಪಹಣಿ ಪ್ರತಿಯನ್ನು ಪಡೆಯಲು ಸರ್ಕಾರವು ನಿಗದಿಪಡಿಸಿರುವ ಶುಲ್ಕದ ವಿವರವೇನು;

(ಆ) ಪಹಣಿ ಪ್ರತಿ ನೀಡಿದ್ದಲ್ಲಿ, ಹಣ ಸಂದಾಯ ರಶೀದಿ ನೀಡಲಾಗುತ್ತಿದೆಯೇ;

(ಇ) ಈ ಕೆಲಸವನ್ನು ನಿರ್ವಹಿಸಲು ಸರ್ಕಾರ ಹೊರಗುತ್ತಿಗೆ ನೌಕರರನ್ನು ನೇಮಿಸಲಾಗಿದೆಯೇ; (ವಿವರ ನೀಡುವುದು)

(ಈ) ಪಹಣಿ ಪ್ರತಿ ನೀಡಲು ನಿಗದಿಪಡಿಸಿದ ಶುಲ್ಕದ ಮೊತ್ತಕ್ಕಿಂತ ಹೆಚ್ಚುವರಿ ಶುಲ್ಕವನ್ನು ಸಿಬ್ಬಂದಿ ವರ್ಗದವರು ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಕೈಗೊಂಡ ಕ್ರಮವೇನು;

(ಉ) ಶುಲ್ಕವನ್ನು ಕಡಿಮೆ ಮಾಡುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ವಿವರ ನೀಡುವುದು;

(ಊ) ಪ್ರಸ್ತುತ ವ್ಯವಸ್ಥೆಯಲ್ಲಿ ಗ್ರಾಮಾಂತರದ ಜನರು ತಾಲ್ಲೂಕು ಕೇಂದ್ರಕ್ಕೆ ಬಂದು ಪಹಣಿ ಪ್ರತಿ ಪಡೆಯಲು ಅನಾನುಕೂಲವಾಗಿರುವುದರಿಂದ ತಂತ್ರಜ್ಞಾನವನ್ನು ಬಳಸಿಕೊಂಡು ಹೋಬಳಿ ಮತ್ತು ಪಂಚಾಯತ್ ಮಟ್ಟದಲ್ಲಿ ಪಹಣಿ ಪ್ರತಿ ನೀಡಲು ಸರ್ಕಾರ ಕ್ರಮಕೈಗೊಂಡಿದೆಯೇ? (ವಿವರ ನೀಡುವುದು)

## ಕನ್ನಡ ಚಲನಚಿತ್ರ ರಂಗದ ಕಾರ್ಮಿಕರ ಕಲ್ಯಾಣದ ಬಗ್ಗೆ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೨೭೭ (೨೨೮೨) ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕನ್ನಡ ಚಲನಚಿತ್ರ ರಂಗದಲ್ಲಿ ಕೆಲಸ ಮಾಡುವ ಕಾರ್ಮಿಕರ ಕಲ್ಯಾಣಕ್ಕಾಗಿ ಸರ್ಕಾರ ಕೈಗೊಂಡಿರುವ ಯೋಜನೆಗಳಾವುವು;

(ಆ) ಕಳೆದ ೮೪ ವರ್ಷಗಳ ಇತಿಹಾಸ ಇರುವ ಚಿತ್ರರಂಗದಲ್ಲಿ ಎರಡು–ಮೂರು ತಲೆಮಾರುಗಳಿಂದ ಕೆಲಸ ನಿರ್ವಹಿಸುತ್ತಿರುವ ನಿವೃತ್ತ ಕಾರ್ಮಿಕರುಗಳಿಗೆ ಸಾಮಾಜಿಕ ಭದ್ರತೆ ಒದಗಿಸಲು ಪಿಂಚಣಿ ನೀಡುವ ಆಲೋಚನೆ ಸರ್ಕಾರಕ್ಕೆ ಇದೆಯೇ;

(ಇ) ಚಲನಚಿತ್ರ ರಂಗದ ಕಾರ್ಮಿಕರ ಮಕ್ಕಳಿಗೆ ತಾಂತ್ರಿಕ (ಇಂಜಿನಿಯರಿಂಗ್) ಮತ್ತು ವೈದ್ಯಕೀಯ ಶಿಕ್ಷಣಕ್ಕೆ ಪ್ರವೇಶಾವಕಾಶದಲ್ಲಿ ಕನಿಷ್ಠ ೨% ಮೀಸಲಾತಿಯನ್ನು ಕಲ್ಪಿಸುವ ಬಗ್ಗೆ ಸರ್ಕಾರದ ನಿಲುವೇನು;

(ಈ) ಈ ರಂಗದಲ್ಲಿ ಕಾರ್ಯನಿರ್ವಹಿಸುತ್ತಿರುವ ಮಹಿಳಾ ಕಾರ್ಮಿಕರ ಬಗ್ಗೆ ವಿಶೇಷವಾದ ಯೋಜನೆಗಳನ್ನು ಇಲಾಖೆ ರೂಪಿಸಿದೆಯೇ; ಮುಖ್ಯವಾಗಿ ವಿಧವೆಯರಿಗೆ ಮಾಶಾಸನ ನೀಡುವ ಬಗ್ಗೆ ಯಾವುದಾದರೂ ಪ್ರತ್ಯೇಕವಾದ ಅವಕಾಶವನ್ನು ಕಲ್ಪಿಸಲಾಗಿದೆಯೇ?

## ಬಾಲ ಕಾರ್ಮಿಕ ಪದ್ಧತಿಯ ನಿರ್ಮೂಲನೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)**

೨೭೮ (೨೨೪೯+೨೨೬೫) ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಇತ್ತೀಚಿನ ಗಣತಿಯ ಪ್ರಕಾರ ರಾಜ್ಯದಲ್ಲಿರುವ ಬಾಲ ಕಾರ್ಮಿಕರೆಷ್ಟು; (ಜಿಲ್ಲಾವಾರು, ಗಂಡು–ಹೆಣ್ಣು ವಿವರವನ್ನು ನೀಡುವುದು)

(ಆ) ಬಾಲ ಕಾರ್ಮಿಕ ಪದ್ಧತಿಯನ್ನು ನಿರ್ಮೂಲನೆ ಮಾಡಲು ಕ್ರಿಯಾ ಯೋಜನೆಯನ್ನು ರೂಪಿಸಲು ಸರ್ಕಾರ ಆಲೋಚಿಸಿದೆಯೇ;

(ಇ) ಹಾಗಿದ್ದಲ್ಲಿ, ಅದಕ್ಕೆ ವಿಧಿಸಿಕೊಂಡಿರುವ ಕಾಲಮಿತಿಯೇನು;

(ಈ) ಬೀದರ್ ಜಿಲ್ಲೆಯಲ್ಲಿ ಬಾಲ ಕಾರ್ಮಿಕರು ಹೆಚ್ಚಿನ ಸಂಖ್ಯೆಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಬಾಲ ಕಾರ್ಮಿಕರ ವಿವರ ನೀಡುವುದು;

(ಉ) ೨೦೧೫–೧೬ನೇ ಸಾಲಿನಲ್ಲಿ ಬೀದರ್ ಜಿಲ್ಲೆಯಲ್ಲಿ ಕಾರ್ಮಿಕ ಕಲ್ಯಾಣ ಇಲಾಖೆಗೆ ಬಿಡುಗಡೆಯಾದ ಅನುದಾನ ಎಷ್ಟು; ಬಳಕೆಯಾದ ಅನುದಾನ ಎಷ್ಟು?

## NRBC ಕಾಲುವೆ ಮುಖಾಂತರ ವಿವಿಧ ಕೆರೆಗಳಿಗೆ ನೀರು ತುಂಬಿಸುವ ಕುರಿತು

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) –**

೨೭೯ (೨೩೨೯) ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಯಚೂರು ನಗರ ಸೇರಿದಂತೆ ಜಿಲ್ಲೆಯ ವಿವಿಧ ಗ್ರಾಮಗಳಿಗೆ ಕುಡಿಯುವ ನೀರಿಗಾಗಿ NRBC–೧೧೬ ಕಿ.ಮೀ. ಯಿಂದ ಗಣೆಕಲ್ ರಿಸರ್ವಾಯರ್‌ಗೆ ನೀರು ಒದಗಿಸಲು ಸರ್ಕಾರ ತೆಗೆದುಕೊಂಡ ಕ್ರಮ ಏನು;

(ಆ) ರಾಯಚೂರು ತಾಲ್ಲೂಕಿನಲ್ಲಿ ಬರುವ ವಿವಿಧ ಕೆರೆಗಳಿಗೆ NRBC ಕಾಲುವೆ ಮುಖಾಂತರ ನೀರು ತುಂಬಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು?

## ಪ್ರತಿಷ್ಠಿತ ಕ್ಲಬ್‌ಗಳು ಮತ್ತು ಅವುಗಳ ಮೇಲಿನ ನಿಯಂತ್ರಣ

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು)** –

೨೮೦ (೨೩೪೨) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರು ನಗರದಲ್ಲಿ ಎಷ್ಟು ಪ್ರತಿಷ್ಟಿತ ಕ್ಲಬ್‌ಗಳಿವೆ; ಅವು ಯಾವುವು; (ವಿವರ ನೀಡುವುದು)

(ಆ) ವಿಧಾನ ಸೌಧದಿಂದ ೩.೦ ಕಿ.ಮೀ. ಅಂತರದಲ್ಲಿ ಇರುವ ಕ್ಲಬ್‌ಗಳು ಯಾವುವು;

(ಇ) ಆ ಕ್ಲಬ್‌ಗಳಿಗೆ ಸರ್ಕಾರ ನೀಡಿರುವ ಮತ್ತು ನೀಡುತ್ತಿರುವ ಸೌಲಭ್ಯಗಳಾವುವು; (ಕ್ಲಬ್‌ವಾರು ಮಾಹಿತಿ ನೀಡುವುದು)

(ಈ) ಆ ಕ್ಲಬ್‌ಗಳಲ್ಲಿ ಎಷ್ಟು ಜನ ಸದಸ್ಯರಿದ್ದಾರೆ; ಆ ಪೈಕಿ ಖಾಯಂ ಸದಸ್ಯರು ಮತ್ತು ತಾತ್ಕಾಲಿಕ ಸದಸ್ಯರ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಉ) ಗಾಲ್ಫ್ ಕ್ಲಬ್, ಸೆಂಚುರಿ ಕ್ಲಬ್, ಟರ್ಫ್ ಕ್ಲಬ್, ಬೌರಿಂಗ್ ಇನ್‌ಸ್ಟಿಟ್ಯೂಟ್, ಬೆಂಗಳೂರು ಕ್ಲಬ್, ಟೆನ್ನಿಸ್ ಕ್ಲಬ್ ಮತ್ತು ಸಚಿವಾಲಯ ಕ್ಲಬ್‌ನ ಖಾಯಂ/ ತಾತ್ಕಾಲಿಕ ಸದಸ್ಯರ ಸಂಖ್ಯೆ ಎಷ್ಟು; (ಅವರುಗಳ ಹೆಸರು ಮತ್ತು ವಿಳಾಸದೊಂದಿಗೆ ಮಾಹಿತಿ ನೀಡುವುದು)

(ಊ) ಆ ಸದಸ್ಯರುಗಳ ಪೈಕಿ, ಸರ್ಕಾರಿ ಅಧಿಕಾರಿಗಳು ಮತ್ತು ನೌಕರರು ಸದಸ್ಯತ್ವ ಹೊಂದಿದ್ದಾರೆಯೇ; ಹೊಂದಿದ್ದಲ್ಲಿ, ಅವರ ಹೆಸರು, ಹುದ್ದೆಯ ಮಾಹಿತಿ ನೀಡುವುದು;

(ಋ) ಕ್ಲಬ್‌ಗಳನ್ನು ನಿಯಂತ್ರಿಸಲು ಸರ್ಕಾರಕ್ಕಿರುವ ಅಧಿಕಾರವೇನು; ಹಾಗೆ ನಿಯಂತ್ರಿಸಲು ನಿಯಮಗಳನ್ನು ರೂಪಿಸಲಾಗಿದೆಯೇ; (ವಿವರ ನೀಡುವುದು)

(ಎ) ನಿಯಮಗಳನ್ನು ಉಲ್ಲಂಘಿಸಿದ ಕ್ಲಬ್‌ಗಳ ವಿರುದ್ಧ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು? (ವಿವರ ನೀಡುವುದು)

## ಗದಗ ನಗರದ ಆಸ್ತಿ ಉತಾರಗಳನ್ನು ತಹಶೀಲ್ದಾರ್ ಕಛೇರಿಯಿಂದ ಕೈ ಬರಹದಲ್ಲಿ ಕೊಡುವುದನ್ನು ನಿಲ್ಲಿಸಿರುವುದು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) –**

೨೮೧ (೨೩೪೧) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಗದಗ ನಗರದ ಆಸ್ತಿ ಉತಾರಗಳನ್ನು ತಹಶೀಲ್ದಾರ್ ಕಛೇರಿಯಿಂದ ಕೈ ಬರಹದಲ್ಲಿ ನೀಡುವ ಪದ್ಧತಿಯನ್ನು ಸುತ್ತೋಲೆ ಹೊರಡಿಸುವುದರ ಮೂಲಕ ನಿಲ್ಲಿಸಿದ್ದು ನಿಜವೇ; ಹಾಗಿದ್ದಲ್ಲಿ, ಇದಕ್ಕೆ ಯಾವ ಪರ್ಯಾಯ ವ್ಯವಸ್ಥೆಯನ್ನು ಮಾಡಲಾಗಿದೆ;

(ಆ) ಗದಗ ನಗರದಲ್ಲಿ ಕಳೆದ ೨$^{೧}/_{೨}$ (ಎರಡೂವರೆ) ತಿಂಗಳಿನಿಂದ ಕೈಬರಹದ ಉತಾರ ಕೊಡುವುದನ್ನು ನಿಲ್ಲಿಸಿದ್ದಕ್ಕಾಗಿ ಮತ್ತು ಪರ್ಯಾಯ ವ್ಯವಸ್ಥೆ ಮಾಡಲಾರದಕ್ಕಾಗಿ ಜನರಿಗೆ ಬಹಳಷ್ಟು ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಈ ಸಮಸ್ಯೆಯನ್ನು ಯಾವ ರೀತಿ ಮತ್ತು ಯಾವಾಗ ಪರಿಹರಿಸುತ್ತೀರಿ?

## ಬೋಧನಾ ಶುಲ್ಕದ ಪರಿಷ್ಕರಣೆ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ)–**

೨೮೨ (೨೨೮೯) ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಕೈಗಾರಿಕಾ ತರಬೇತಿ ಸಂಸ್ಥೆ (ಐ.ಟಿ.ಐ.)ಗಳ ಬೋಧನಾ/ತರಬೇತಿ ಶುಲ್ಕವು ದಶಕಗಳ ಹಿಂದೆ ನಿಗದಿಪಡಿಸಿದ್ದು, ಇದನ್ನು ಕೇಂದ್ರ ಸರ್ಕಾರದ ಡಿ.ಜಿ.ಟಿ.ಯು ೨೦೧೫ರಲ್ಲಿ ಇದನ್ನು ಪರಿಷ್ಕರಣೆ ಮಾಡಿದ್ದು ಅದರಂತೆ ಕ್ರಮ ಕೈಗೊಳ್ಳಲು ರಾಜ್ಯ ಸರ್ಕಾರದ ಉದ್ಯೋಗ ಮತ್ತು ತರಬೇತಿ ಇಲಾಖೆಗೆ ಸೂಚಿಸಲಾಗಿದೆಯೇ;

(ಆ) ಸೂಚಿಸಿದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮವೇನು;

(ಇ) ಇಲ್ಲವಾದಲ್ಲಿ, ಕ್ರಮ ಕೈಗೊಳ್ಳಲಾಗುವುದು ಯಾವಾಗ?

## ಅರಣ್ಯ ಸಂರಕ್ಷಿತ ಪ್ರದೇಶದಲ್ಲಿ ವಾಣಿಜ್ಯ ಚಟುವಟಿಕೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೨೮೩ (೨೩೩೭) ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನಾಗರಹೊಳೆ ಹುಲಿ ಸಂರಕ್ಷಿತ ವ್ಯಾಪ್ತಿಯಲ್ಲಿ ಮೂರ್ಕಲ್ ಬಳಿ ವಾಣಿಜ್ಯ ಚಟುವಟಿಕೆ ನಡೆಸಲು ಖಾಸಗಿ ಕಂಪನಿಯೊಂದಕ್ಕೆ ಈ ಹಿಂದೆ ಗುತ್ತಿಗೆಗೆ ನೀಡಿರುವುದು ನಿಜವೇ;

(ಆ) ಈ ರೀತಿ ಗುತ್ತಿಗೆ ನೀಡುವ ಮೊದಲು ಕೇಂದ್ರ ಸರ್ಕಾರದ ಅನುಮತಿ ಪಡೆಯುವುದು ಕಡ್ಡಾಯವಲ್ಲವೇ; ಈ ನಿಯಮವು ಉಲ್ಲಂಘನೆಯಾಗಿರುವುದು ನಿಜವೇ;

(ಇ) ಸದರಿ ಪ್ರಕರಣಕ್ಕೆ ಸಂಬಂಧಿಸಿದಂತೆ ನ್ಯಾಯಾಲಯದಿಂದ ಆದೇಶ ಬಂದಿರುವುದು ನಿಜವೇ? (ವಿವರ ನೀಡುವುದು)

## ಬೆಂಗಳೂರಿನ ಚೆಲ್ಲಘಟ್ಟ ಮತ್ತು ವರ್ತೂರು ಕೆರೆಗಳ ಕುರಿತು

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೮೪ (೨೩೧೮) ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರಿನ ಚೆಲ್ಲಘಟ್ಟ ಮತ್ತು ವರ್ತೂರು ಕೆರೆಗಳಿಂದ ಸಂಸ್ಕರಣೆಯಾದ ನೀರು ತಮಿಳುನಾಡಿಗೆ ಹರಿದು ಪೋಲಾಗುತ್ತಿದ್ದು, ರಾಜ್ಯದ ರೈತರಿಗೆ ದೊರೆಯದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಸರ್ಕಾರ ಈ ನಿಟ್ಟಿನಲ್ಲಿ ಏನು ಕ್ರಮ ಕೈಗೊಂಡಿದೆ;

(ಆ) ಈ ನೀರನ್ನು ಹೊಸಕೋಟೆಯ ಬಳಿಯ ದಕ್ಷಿಣ ಪಿನಾಕಿಣಿ ನದಿಗೆ ಹರಿಸುವ ಸಂಬಂಧ ರೂಪಿಸಿರುವ ಯೋಜನೆಯನ್ನು ಸರ್ಕಾರ ಕೈಗೆತ್ತಿಕೊಂಡಿದೆಯೇ; ಆರಂಭಿಸಿದ್ದಲ್ಲಿ, ಯೋಜನೆಯ ಅನುಷ್ಠಾನಕ್ಕೆ ಸರ್ಕಾರದಿಂದ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ;

(ಇ) ಕಾಮಗಾರಿಗಳನ್ನು ಯಾವ ಸಂಸ್ಥೆಗೆ ಗುತ್ತಿಗೆ ನೀಡಲಾಗಿದೆ ಮತ್ತು ಪ್ರಸ್ತುತ ಕಾಮಗಾರಿಗಳು ಯಾವ ಹಂತದಲ್ಲಿವೆ?

## ೭ ವರ್ಷ ಅವಧಿ ಪೂರೈಸಿದ ಖಾಸಗಿ ಐಟಿಐ ಕಾಲೇಜುಗಳನ್ನು ಅನುದಾನಕ್ಕೊಳಪಡಿಸುವ ಕುರಿತು

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) –**

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೨೮೫ (೨೩೫೨+೨೨೮೮) ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಅನುದಾನ ರಹಿತ ಖಾಸಗಿ ಐ.ಟಿ.ಐ. ಕಾಲೇಜುಗಳ ಜಿಲ್ಲಾವಾರು ಸಂಖ್ಯೆ ಎಷ್ಟು;

(ಆ) ಇವುಗಳಲ್ಲಿ ಏಳು ವರ್ಷಗಳ ಅವಧಿಯನ್ನು ಪೂರ್ಣಗೊಳಿಸಿದ ಖಾಸಗಿ ಐ.ಟಿ.ಐ.ಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಥಾಮಸ್ ವರದಿಯ ಪ್ರಕಾರ ಏಳು ವರ್ಷಗಳ ಅವಧಿ ಪೂರ್ಣಗೊಳಿಸಿದ ಖಾಸಗಿ ಐ.ಟಿ.ಐ. ಕಾಲೇಜುಗಳನ್ನು ಸರ್ಕಾರದ ವೇತನಾನುದಾನಕ್ಕೊಳಪಡಿಸಲು ಅವಕಾಶ ಕಲ್ಪಿಸಿದ್ದು ನಿಜವೇ; ಈ ನಿಟ್ಟಿನಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಈ) ಐ.ಟಿ.ಐ. ಕಾಲೇಜುಗಳನ್ನು ವೇತನಾನುದಾನಕ್ಕೊಳಪಡಿಸಲು ಉದ್ಯೋಗ ಮತ್ತು ತರಬೇತಿ ಇಲಾಖೆ ಪೂರ್ವಭಾವಿ ಪರಿವೀಕ್ಷಣೆ ಕಾರ್ಯ ನಡೆಸಿದ್ದು ಯಾವಾಗ; ಕೈಗೊಂಡ ಕ್ರಮಗಳೇನು; (ವಿವರ ನೀಡುವುದು)

(ಉ) ಏಳು ವರ್ಷ ಅವಧಿ ಪೂರ್ಣಗೊಳಿಸಿ, ಅನುದಾನಕ್ಕೊಳಪಡಲು ಬಾಕಿ ಇರುವ ಐ.ಟಿ.ಐ. ಕಾಲೇಜುಗಳನ್ನು ಯಾವ ಕಾಲಮಿತಿಯೊಳಗೆ ಅನುದಾನಕ್ಕೆ ಒಳಪಡಿಸಲು ಕ್ರಮ ಕೈಗೊಳ್ಳಲಾಗುವುದು?

**ಶ್ರೀನಿವಾಸ**
ಕಾರ್ಯದರ್ಶಿ (ಪ್ರ)
ಕರ್ನಾಟಕ ವಿಧಾನ ಪರಿಷತ್ತು

ನಿರ್ದೇಶಕರು, ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು, ಕಾಸೂ–328–1500 ಪ್ರತಿಗಳು (ಪಿ1)